ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: ಪಶುಸಂಗೋಪನೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 16/2/21

## ಪಶು ಸಂಗೋಪನ ಸಚಿವ ಪ್ರಭು ಚೌಹಾಣ್ ಹೇಳಿಕೆ

# ಗೋ ಹತ್ಯೆ ನಿಷೇಧದಿಂದ ಮಾಂಸದ ಕೊರತೆಯಿಲ್ಲ

**■ ವಿಕ ಸುದ್ದಿಲೋಕ** ರಾಮನಗರ

ಜಾನುವಾರು ಹತ್ಯೆ ನಿಷೇಧ 16-2-21 ಕಾಯಿದೆಯಿಂದ ಮೃಗಾಲಯಗಳಲ್ಲಿನ



ಪ್ರಾಣಿಗಳಿಗೆ ಆಹಾರ ಕೊರತೆ ಉಂಟಾಗಿದೆ ಎಂಬುದು ಸುಳ್ಳು. 13 ವರ್ಷ ತುಂಬಿದ ಕೋಣ, ಎಮ್ಮೆಗಳನ್ನು ಕಡಿಯಲು ಅವಕಾಶ ಇದೆ ಎಂದು ಪಶು ಸಂಗೋಪನಾ ಸಚಿವ ಪ್ರಭು ಚೌಹಾಣ್ ಹೇಳಿದ್ದಾರೆ.

ರಾಮನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಸುದ್ದಿಗಾರರ ಜತೆ ಮಾತನಾಡಿದರು.

**ರೈತರಿಗೆ ಹೊರೆಯಲ್ಲ**

ಜಾನುವಾರು ಹತ್ಯೆ ನಿಷೇಧ ಕಾಯಿದೆಯಿಂದ ರೈತರಿಗೆ ಹೊರೆಯಾಗುತ್ತಿದೆ. ಗಂಡು ಕರುಗಳನ್ನು ಸಾಕುವ ಹೆಚ್ಚುವರಿ ಹೊರೆ ಬಿದ್ದಿದೆ ಎಂಬ ಮಾತು ಸರಿಯಲ್ಲ. ಗಂಡು ಕರುಗಳನ್ನು ರೈತರು ಕೇವಲ ಮೂರು ತಿಂಗಳು ನೋಡಿಕೊಂಡರೆ ಸಾಕು. ಆ ಬಳಿಕ ಆ ಕರುಗಳನ್ನು ಇಲಾಖೆ ಮೂಲಕ ಗೋಶಾಲೆಗಳಿಗೆ ಕಳುಹಿಸಲಾಗುತ್ತದೆ. ಇಂತಹ ಗೋಶಾಲೆಗಳಿಗೆ ಸರಕಾರವೇ ಅನುದಾನ ನೀಡುತ್ತದೆ ಎಂದರು.

ಜಾನುವಾರು ಹತ್ಯೆ ನಿಷೇಧದಿಂದ ಮೃಗಾಲಯಗಳಲ್ಲಿ ಆಹಾರ ಸಮಸ್ಯೆ ಉಂಟಾಗಿದೆ ಎಂಬುದು ಕೂಡ ಸತ್ಯವಲ್ಲ. ಆಹಾರ ಕೊರತೆ ಉಂಟಾಗಿದೆ ಎಂದು ಅಧಿಕಾರಿಗಳು ಎಲ್ಲಿಯೂ ಹೇಳಿಲ್ಲ. ಹಾಗೇನಾದರೂ ಆಗಿದ್ದು ಸರಕಾರಕ್ಕೆ ಮನವಿ ಸಲ್ಲಿಸಿದರೆ, ಪರ್ಯಾಯ ಕ್ರಮಗಳ ಬಗ್ಗೆ ಚಿಂತಿಸಲಾಗುವುದು ಎಂದರು.

**ಪಶುವೈದ್ಯರ ನೇಮಕ**

ಪಶುವೈದ್ಯ ಇಲಾಖೆಯಲ್ಲಿ ವೈದ್ಯರ ಕೊರತೆ ಇದೆ. ವೈದ್ಯರ ನೇಮಕ ಸಂಬಂಧ ಸಿಎಂಗೆ ಮನವಿ ಸಲ್ಲಿಸಲಾಗಿದೆ. ಗೋಹತ್ಯೆ ಪ್ರಕರಣಗಳ ವಿಚಾರಣೆಗೆ ವಿಶೇಷ ನ್ಯಾಯಾಲಯ ಸ್ಥಾಪಿಸಲಾಗುತ್ತಿದೆ. ದಂಡದ ಪ್ರಮಾಣವನ್ನು ಐದು ಸಾವಿರದಿಂದ ಐದು ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುತ್ತಿದೆ ಎಂದರು.

### ಗೋಹತ್ಯೆ ನಿಷೇಧಕ್ಕೆ ರಾಜ್ಯಪತ್ರ

**ಬೆಂಗಳೂರು: ಗೋಹತ್ಯೆ ನಿಷೇಧ ಕುರಿತ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ ಸಂಬಂಧ ರಾಜ್ಯಪತ್ರದಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. ಇದರಿಂದಾಗಿ ಇದು ಕಾನೂನು ರೂಪದಲ್ಲಿ ಜಾರಿಯಾದಂತಾಗಿದೆ. ಈ ವಿಧೇಯಕ ವಿಧಾನ ಪರಿಷತ್‌ನಲ್ಲಿ ಅಂಗೀಕಾರಗೊಳ್ಳುವುದು ಬಾಕಿ ಇದ್ದಿದ್ದರಿಂದ ಈ ಮೊದಲು ಸುಗ್ರೀವಾಜ್ಞೆ ಹೊರಡಿಸಲಾಗಿತ್ತು. ಈಗ ಪರಿಷತ್‌ನಲ್ಲೂ ವಿಧೇಯಕ ಪಾಸಾದದ್ದರಿಂದ ರಾಜ್ಯಪತ್ರದಲ್ಲಿ ಅಧಿಸೂಚನೆ ಹೊರಡಿಸಲಾಗಿದೆ.**

●

ಸಚಿವ ಸ್ಥಾನ ಹಂಚಿಕೆಯಲ್ಲಿ ವಿಜಯೇಂದ್ರ ಅವರ ಹಸ್ತಕ್ಷೇಪ ಇಲ್ಲ. ನಮ್ಮ ಪಕ್ಷದಲ್ಲಿ ಸಚಿವ ಸ್ಥಾನ ಆಕಾಂಕ್ಷಿಗಳು ಹೆಚ್ಚಿದ್ದಾರೆ. ಅವಕಾಶ ಕಡಿಮೆ ಇದೆ. ಆದ್ದರಿಂದಲೇ ಸ್ವಲ್ಪ ಅಸಮಾಧಾನ ಇದೆ. ಯತ್ನಾಳ್ ಪಕ್ಷದ ಹಿರಿಯ ನಾಯಕರು, ಪಕ್ಷದ ವರಿಷ್ಠರು ಅವರ ಮನವೊಲಿಸುತ್ತಾರೆ.

**-ಪ್ರಭು ಚೌಹಾಣ್**
ಪಶುಸಂಗೋಪನಾ ಸಚಿವ